**MVC :105/2023**

**PW : 1**

<u>ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಕೂಡ್ಲಿಗಿ</u>

ದಿನಾಂಕಃ 08.10.2024 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**<u>ಪಾಟೀ ಸವಾಲು : 1 ಮತ್ತು 2 ನೇ ಎದುರುದಾರರ ಪರ ವಕೀಲರಿಂದ,</u>**

ನನ್ನ ತವರು ಮನೆ ಕಾತ್ರಿಕಟ್ಟೆ ಎಂದರೆ ಸರಿ. ನಾನು ಸುಮಾರು ವರ್ಷಗಳಿಂದ ಅಲ್ಲಿಯೇ ಜೀವನ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಕಳೆದ 3 ವರ್ಷಗಳಿಂದ ಸದರಿ ಗ್ರಾಮದಲ್ಲಿ ವಾಸವಾಗಿದ್ದೇನೆ. ಅಪಪಘಾತ ಹೇಗೆ ಆಯಿತು ಎಂಬುವುದರ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ಅಪಘಾತದ ಸಮಯದಲ್ಲಿ ನಾನು ಹುರಳಿಹಾಳ್ ಗ್ರಾಮದಲ್ಲಿ ಇದ್ದೇನು ಎಂದರೆ ಸರಿ. ಅಪಘಾತಕ್ಕೆ ಸಂಬಂಧಿಸಿದಂತೆ ನನ್ನ ಮಾವ ದೂರನ್ನು ಕೊಟ್ಟಿರುತ್ತಾರೆ. ನನ್ನ ಗಂಡ ಮಾನಸಿಕ ಅನಾರೋಗ್ಯದಿಂದ ಬಳಲುತ್ತಿದ್ದರು ಎಂದರೆ ಸರಿಯಲ್ಲ. ಅವರು ಶಿವಮೊಗ್ಗದ ಮಾನಸಿಕ ಆಸ್ಪತ್ರೆಯೊಂದರಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು ಎಂದರೆ ಸರಿಯಲ್ಲ. ಇತ್ತೀಚೆಗೆ ಅವರು ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದಂತೆ ಚಿಕಿತ್ಸೆ ಪಡೆಯುದ್ದನ್ನು ಬಿಟ್ಟಿದ್ದರು ಎಂದರೆ ಸರಿಯಲ್ಲ. ಪರಿಹಾರ ಪಡೆಯಬೇಕೆಂಬ ಕಾರಣಕ್ಕಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ಕಾರಣಕ್ಕಾಗಿ ಅವರನ್ನು ಬಿಟ್ಟು ನನ್ನ ತವರು ಮನೆಯಲ್ಲಿ ವಾಸವಾಗಿದ್ದೇನು ಎಂದರೆ ಸರಿಯಲ್ಲ. ಅದೇ ಕಾರಣಕ್ಕಾಗಿ ನನ್ನ ಯಜಮಾನರು ಹೊಲದಲ್ಲಿ ಗುಡಿಸಲು ಕಟ್ಟಿಕೊಂಡು ವಾಸವಾಗಿದ್ದರು ಎಂದರೆ ಸರಿಯಲ್ಲ. ನಿಪಿ- 4 ರಲ್ಲಿ ಮೃತ ನಾಗೇಶ ರವರು ಮಲ್ಲಿಕಾರ್ಜುನರವರ ಜೊತೆ ವಾಸವಾಗಿದ್ದರು ಎಂದರೆ ಎಲ್ಲರೂ ಒಟ್ಟಿಗೆ ವಾಸವಾಗಿದ್ದೇವು ಎಂದು ನುಡಿಯುತ್ತಾರೆ. ನಿಪಿ-1 ರಲ್ಲಿ ಚಾಸಾ-1 ರವರು ನೀಡಿರುವ ದೂರಿನಲ್ಲಿ ಎದೆಗೆ, ಕಾಲಿಗೆ, ತಲೆಗೆ ಹಾಗೂ ಮುಖಕ್ಕೆ ಕೆತ್ತಿದ ರಕ್ತ ಗಾಯಗಳಾಗಿವೆ ಎಂಬುವುದಾಗಿ ಬರೆದಿವೆ ಎಂದರೆ ಸರಿ.

ನಿಪಿ-1 ರಲ್ಲಿ ನಮೂದಿಸಿದ ಗಾಯಗಳು ನಿಪಿ-8 ರಲ್ಲಿ ನಮೂದಿಸಿಲ್ಲ ಎಂದರೆ ಸರಿಯಲ್ಲ. ಪಿ.ಎಂ ವರದಿಯಲ್ಲಿ ಕಣ್ಣು ಮತ್ತು ಕಾಲಿನ ಭಾಗದಲ್ಲಿ ಗಾಯವಾಗಿದೆ ಎಂದರೆ ಸರಿ. ತಲೆಯ ಭಾಗದಲ್ಲಿ ಗಾಯವಾಗಿಲ್ಲ ಎಂಬುವುದಾಗಿ ಬರೆದಿಲ್ಲ ಎಂದರೆ ಸರಿಯಲ್ಲ. ತಲೆಯ ಭಾಗದಲ್ಲಿ ಗಾಯವಾಗಿತ್ತು. ಎದೆಯ ಭಾಗ ಮತ್ತು ಪಕ್ಕೆಲುಬು ಭಾಗದಲ್ಲಿ ಯಾವುದೇ ಗಾಯಗಳು ಆಗಿದ್ದು ಕಂಡು ಬಂದಿಲ್ಲ ಎಂಬುವುದಾಗಿ ಬರೆದಿದ್ದಾರೆ ಎಂದರೆ ಸರಿಯಲ್ಲ. ಗಾಯಗಳಾಗಿದ್ದವು ಎಂದು ನುಡಿಯುತ್ತಾರೆ.

ನನ್ನ ಗಂಡನಿಗೆ ಮಾನಸಿಕ ತೊಂದರೆ ಇರುವುದರಿಂದ ಹಾಲಿನ ವ್ಯಾಪಾರ ಮತ್ತು ವ್ಯವಸಾಯ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ನನಗೆ ಒಟ್ಟು ಐದು ಜನ ಮಕ್ಕಳಿದು ನನ್ನ ಗಂಡ ಮೃತಪಟ್ಟಿದ್ದರಿಂದ ನನಗೆ ಯಾವುದೇ ತೊಂದರೆ ಇರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಮಗಳು ಅಮೃತಾ ಬಿ.ಎಸ್.ಸಿ ನರ್ಸಿಂಗ್ ಮಾಡುತ್ತಿದ್ದಾರೆ ಎಂದರೆ ಸರಿ. 2 ನೇ ಎದುರುದಾರರು ಕೂಲಿ ಮಾಡಿ ಜೀವನ ಮಾಡುತ್ತಾರೆ ಎಂದರೆ ಸರಿಯಲ್ಲ. 2 ನೇ ಎದುರುದಾರರಿಗೆ ಯಾವುದೇ ಹೊಲ ಮನೆ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಕೋರಿರುವ ಪರಿಹಾರವನ್ನು ಎದುರುದಾರರು ನೀಡಲು ಶಕ್ತರಿಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರರಿಗೂ ಸಹ ಗಾಯಗಳಾಗಿದ್ದವು ಎಂದರೆ ಸರಿಯಲ್ಲ. 1 ನೇ ಎದುರುದಾರರಿಗೆ ತೀವ್ರ ಸ್ವರೂಪದ ಗಾಯಗಳು ಆಗಿದ್ದವು ಎಂಬುವುದಾಗಿ ಬರೆದಿದ್ದಾರೆ ಎಂದರೆ ಸರಿಯಲ್ಲ. ಸದರಿ ಅಪಘಾತವು 1 ನೇ ಎದುರುದಾರರ ತಪ್ಪಿನಿಂದ ಆಗಿಲ್ಲ ಎಂದರೆ ಸರಿಯಲ್ಲ. ನನ್ನ ಗಂಡನ ತಪ್ಪಿನಿಂದ ಸದರಿ ಅಪಘಾತವವಾಗಿದೆ ಎಂದರೆ ಸರಿಯಲ್ಲ. ಹಾಗಾಗಿ 1 ಮತ್ತು 2 ನೇ ಎದುರುದಾರರು ನಮಗೆ ಯಾವುದೇ ಪರಿಹಾರ ನೀಡಲು ಬಾದ್ಯಸ್ಥರಲ್ಲ ಎಂದರೆ ಸರಿಯಲ್ಲ.

**(ಮುಂದುವರೆದ ಪಾಟೀ ಸವಾಲು ಕೊರಿಕೆಯ ಮೇರೆಗೆ ಮುಂದೂಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

ಓ,ಹೇ,ಕೇ,ಸರಿ ಇದೆ,

ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ
ಕೂಡ್ಲಿಗಿ.